Akashvani : Bangalore
Regional Bulletin In Kannada
15.04.2025 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಮುಡಾ ಹಗರಣ - ತನಿಖೆ ಮುಂದುವರಿಸುವಂತೆ ಲೋಕಾಯುಕ್ತಕ್ಕೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸೂಚನೆ

- ಜಾತಿಗಣತಿ ವರದಿಯನ್ನು ಒಪ್ಪಲು ಸಾಧ್ಯವಿಲ್ಲ ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸ್ಪಷ್ಟನೆ

- ತಂತ್ರಜ್ಞಾನ ಕ್ಷೇತ್ರದಲ್ಲಿ ಸಹಭಾಗಿತ್ವ ಏರ್ಪಡಿಸಲು ರಾಜ್ಯ ಸರ್ಕಾರ, ಜರ್ಮನಿಯ ಬವೇರಿಯಾ ಪ್ರಾಂತ್ಯದೊಂದಿಗೆ ಒಪ್ಪಂದ

- ನಾಳೆ ರಾಜ್ಯಾದ್ಯಂತ ಸಾಮಾನ್ಯ ಪ್ರವೇಶ ಪರೀಕ್ಷೆ ; ವಸ್ತ್ರ ಸಂಹಿತೆ ಪಾಲಿಸುವಂತೆ ಪರೀಕ್ಷಾ ಪ್ರಾಧಿಕಾರ ಸೂಚನೆ

**<><*<><>*><>**

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರೆಸಲು ಲೋಕಾಯುಕ್ತಕ್ಕೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಸೂಚನೆ ನೀಡಿದೆ. ವಿಚಾರಣೆಯನ್ನು ನ್ಯಾಯಾಲಯ ಮೇ ೭ ಕ್ಕೆ ಮುಂದೂಡಿದೆ. ಲೋಕಾಯುಕ್ತ ಸಲ್ಲಿಸಿರುವ ಬಿ ರಿಪೋರ್ಟ್ ಕುರಿತಂತೆ ಯಾವುದೇ ಅಂತಿಮ ನಿರ್ಧಾರವನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಪ್ರಕಟಿಸಿಲ್ಲ. ಮುಡಾ ಪ್ರಕರಣದ ತನಿಖೆ ನಡೆಸಿದ ಲೋಕಾಯುಕ್ತ ಪೊಲೀಸರು ಬಿ ರಿಪೋರ್ಟ್ ಸಲ್ಲಿಸಿದ್ದು ಕ್ಲೀನ್ ಚಿಟ್ ನೀಡಿದ್ದರು. ಇದರ ವಿರುದ್ಧ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ತಕರಾರು ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಧೀಶರಾದ ಸಂತೋಷ್ ಗಜಾನನ ಭಟ್, ಪ್ರಕರಣ ಸಂಬಂಧ ಯಾವುದೇ ತೀರ್ಪು ನೀಡಿಲ್ಲ. ಇದೇ ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯ ತಕರಾರು ಅರ್ಜಿ ಸಲ್ಲಿಸಲು ಕೋರ್ಟ್ ಅನುಮತಿ ನೀಡಿದೆ.

**<><*<><>*><>**

ಜಾತಿ ಗಣತಿ ವರದಿಯನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಮಾಜಿಕ ಅನ್ಯಾಯದ ವಿರುದ್ಧ ಹೋರಾಟ ನಡೆಸುವುದಾಗಿ ಸ್ಪಷ್ಟಪಡಿಸಿದ್ದಾರೆ. ಹಳೆಯ ಮೈಸೂರು ಪ್ರಾಂತ್ಯಗಳಲ್ಲಿ ವಾಸಿಸುತ್ತಿರುವ ಒಕ್ಕಲಿಗ ಸಮುದಾಯದ ಜನಸಂಖ್ಯೆ ಎಷ್ಟು ಎಂದು ಪ್ರಶ್ನಿಸಿದ್ದಾರೆ. ಒಕ್ಕಲಿಗರು ಮಾತ್ರವಲ್ಲದೇ ವೀರಶೈವ ಲಿಂಗಾಯಿತರು ಮತ್ತು ಇತರೆ ಸಮುದಾಯಗಳ ಅಂಕಿ-ಅಂಶಗಳು ಅಘಾತಗೊಳಿಸಿವೆ ಎಂದು ಹೇಳಿದ್ದಾರೆ. ಇದು ಹೆಚ್ಚುತ್ತಿರುವ ಬೆಲೆ ಏರಿಕೆ, ಭ್ರಷ್ಟಾಚಾರದಿಂದ ಜನರನ್ನು ಬೇರೆಡೆಗೆ ಸೆಳೆಯುವ ತಂತ್ರ ಎಂದು ಕುಮಾರಸ್ವಾಮಿ ಆರೋಪಿಸಿದ್ದಾರೆ.

<><*<><>*><>

ಕೃತಕಬುದ್ಧಿ ಮತ್ತೆ, ಕ್ವಾಂಟಂ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಸ್ಮಾರ್ಟ್ ಸಿಟಿ, ಉನ್ನತ ಶಿಕ್ಷಣ ಮತ್ತು ಸುಸ್ಥಿರ ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದ ಉದ್ದೇಶದಿಂದ ಜರ್ಮನಿಯ ಬವೇರಿಯಾ ಪ್ರಾಂತ್ಯ ಮತ್ತು ರಾಜ್ಯ ಸರ್ಕಾರ ಇಂದು ಹಲವು ಒಡಂಬಡಿಕೆಗಳಿಗೆ ಸಹಿ ಹಾಕಿವೆ. ರಾಜ್ಯ ಸರಕಾರದ ಪರವಾಗಿ ಸಚಿವರಾದ ಎಂ.ಬಿ. ಪಾಟೀಲ್ ಹಾಗೂ ಪ್ರಿಯಾಂಕ್ ಖರ್ಗೆ ಮತ್ತು ಬವೇರಿಯಾ ಪರವಾಗಿ ಅಲ್ಲಿನ ಚಾನ್ಸಲರಿ ಮುಖ್ಯಸ್ಥ ಡಾ.ಪ್ಲೋರಿಯನ್ ಹರ್ಮನ್ ಸಹಿ ಹಾಕಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್, 'ಈ ಒಡಂಬಡಿಕೆಯು ಮುಂದಿನ ೫ ವರ್ಷಗಳ ಕಾಲ ಚಾಲ್ತಿಯಲ್ಲಿರಲಿದೆ. ವಿಮಾನಯಾನ ಮತ್ತು ಬಾಹ್ಯಾಕಾಶ ವಿಜ್ಞಾನ, ವೈದ್ಯಕೀಯ ತಂತ್ರಜ್ಞಾನ, ಪರಿಸರ ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಸೈಬರ್ ಸೆಕ್ಯುರಿಟಿ ಕ್ಷೇತ್ರಗಳಲ್ಲೂ ಪರಸ್ಪರ ಸಹಕಾರ ಸ್ಥಾಪನೆಯಾಗಲಿದೆ' ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, 'ರಾಜ್ಯದ ಐಟಿ-ಬಿಟಿ ಇಲಾಖೆಯು ನವೋದ್ಯಮ ಕ್ಷೇತ್ರದಲ್ಲಿ ಜರ್ಮನಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಇಂದು ರಾಷ್ಟ್ರೀಯ ಮೀನುಗಾರರ ಸಂಘಟನೆ ಮುಖಂಡರ ಜೊತೆ ಸಭೆ ನಡೆಸಿದರು. ಈ ವೇಳೆ ಮೀನುಗಾರರ ಸಂಘಟನೆ ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಕಾಸರಕೋಡ ಟೊಂಕದ ಉದ್ದೇಶಿತ ಖಾಸಗಿ ವಾಹಿನಿ ಬಂದರು ಯೋಜನೆಯನ್ನು ಕೈಬಿಡುವಂತೆ ಮನವಿ ಸಲ್ಲಿಸಿತು. ಅಲ್ಲದೇ ಈ ಯೋಜನೆಗಾಗಿ ಪರಿಸರ ಸೂಕ್ಷ್ಮ ಕಡಲತೀರದ ೫ ಕಿಲೋಮೀಟರ್ ಉದ್ದದ ಮೀನುಗಾರರ ವಸತಿ ನೆಲೆಯಲ್ಲಿ ಚತುಷ್ಪತ ರಸ್ತೆ ಮತ್ತು ರೈಲು ಮಾರ್ಗದ ನಿರ್ಮಾಣ ಯೋಜನೆಯನ್ನು ಕೈಬಿಡಬೇಕು ಎಂದು ಮನವಿ ಮಾಡಿದೆ. ಮೀನುಗಾರರ ಹಾಗೂ ಬಂದರು ವಿರೋಧಿ ಹೋರಾಟಗಾರರ ಮೇಲೆ ಪೊಲೀಸರು ದಾಖಲಿಸಿರುವ ಪ್ರಕರಣಗಳನ್ನು ಕೈಬಿಡುವಂತೆ ಒತ್ತಾಯಿಸಿದ್ದಾರೆ.

<><*<><>*><>

ಡೀಸೆಲ್ ಬೆಲೆ ಏರಿಕೆ ಹಾಗೂ ಟೋಲ್ ದರ ಹೆಚ್ಚಳ ಖಂಡಿಸಿ ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಲಾರಿ ಮುಷ್ಕರ ನಡೆಯುತ್ತಿದ್ದು, ಮೈಸೂರಿನಲ್ಲಿ ಲಾರಿಗಳ ಸಂಚಾರ ಸ್ಥಗಿತಗೊಳಿಸಿ ಲಾರಿ ಮಾಲೀಕರು ಮುಷ್ಕರ ನಡೆಸಿದ್ದಾರೆ.

ಮೈಸೂರಿನಲ್ಲಿರುವ ಸುಮಾರು ೯ ಸಾವಿರ ಸರಕು ಲಾರಿಗಳು ಸಂಪೂರ್ಣ ಬಂದ್ ಆಗಿದ್ದು, ಅಗತ್ಯ ವಸ್ತುಗಳ ಸೇವೆ ಹೊರತುಪಡಿಸಿ ಉಳಿದ ಸೇವೆಗಳಿಗೆ ನಿರ್ಬಂಧ ವಿಧಿಸಲಾಗಿದೆ. ಗೂಡ್ಸ್ ರೈಲಿನಲ್ಲಿ ಬಂದಿರುವ ರೈತರ ರಸಗೊಬ್ಬರವನ್ನ ಅನ್ ಲೋಡ್ ಮಾಡದೇ ಮುಷ್ಕರದಲ್ಲಿ ಭಾಗಿಯಾಗಿರುವ ಚಾಲಕರು, ಬೇಡಿಕೆ ಈಡೇರುವವರೆಗೂ ಸೇವೆ ಆರಂಭಿಸಲ್ಲ ಎಂದು ಪಟ್ಟು ಹಿಡಿದಿದ್ದಾರೆ ಎಂದು ನಮ್ಮ ಮೈಸೂರು ಪ್ರತಿನಿಧಿ ವರದಿ ಮಾಡಿದ್ದಾರೆ. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಬೇಡಿಕೆಗಳ ಕುರಿತಂತೆ ಜಂಟಿ ಕ್ರಿಯಾ ಸಮಿತಿ ಪ್ರತಿನಿಧಿಗಳೊಂದಿಗೆ ಇಂದು ಸಭೆ ನಡೆಸಿದರು. ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಕಾರ್ಮಿಕ ಮುಖಂಡರು, ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

<><*<><>*><>

ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ವ್ಯಾಸಂಗಗಳ ಪ್ರವೇಶಕ್ಕೆ ನಾಳೆ ಮತ್ತು ನಾಡಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ ಎಂದು ಕನ್ನಡ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ. ನಾಳೆ ಭೌತವಿಜ್ಞಾನ, ರಾಸಾಯನ ಶಾಸ್ತ್ರ, ನಾಡಿದ್ದು ಗಣಿತ ಹಾಗೂ ಜೀವ ವಿಜ್ಞಾನ ಪರೀಕ್ಷೆಗಳು ನಡೆಯಲಿವೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ಸಿಸಿ ಟಿವಿ ಅಳವಡಿಸಲಾಗಿದೆ. ವೆಬ್ ಕಾಸ್ಟಿಂಗ್ ಮೂಲಕ ಎಲ್ಲ ೭೭೫ ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಲಾಗಿದೆ. ಅಭ್ಯರ್ಥಿಯ ಚಹರೆ ಮತ್ತು ಪ್ರವೇಶ ಪತ್ರದಲ್ಲಿನ ಕ್ಯೂಆರ್‌ಕೋಡ್ ಮೂಲಕ ಅಭ್ಯರ್ಥಿಯ ಗುರುತು ಪರಿಶೀಲನೆ ಮಾಡಲಾಗುತ್ತದೆ. ಅಭ್ಯರ್ಥಿಗಳು ಕನಿಷ್ಠ ಒಂದೂವರೆ ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರಕ್ಕೆ ಆಗಮಿಸಬೇಕು ಎಂದು ಪರೀಕ್ಷಾ ಪ್ರಾಧಿಕಾರ ಸಲಹೆ ನೀಡಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು ೬ ಸಾವಿರದ ೭೪೧ ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ. ಸಿಇಟಿ ಪರೀಕ್ಷೆ ಬರೆಯುವ ಪುರುಷ, ಮಹಿಳಾ ಅಭ್ಯರ್ಥಿಗಳು ವಸ್ತ್ರ ಸಂಹಿತೆ ಪರಿಪಾಲನೆ ಮಾಡಬೇಕು ಎಂದು ಸೂಚಿಸಲಾಗಿದೆ.

<><*<><>*><>

ವೇವ್ಸ್ ಅನಿಮೆ ಮತ್ತು ಮಾಂಗಾ ಸ್ಪರ್ಧೆಯ ರಾಜ್ಯ ಮಟ್ಟದ ಅರ್ಹತಾ ಸುತ್ತಿನ ಸ್ಪರ್ಧಿಗಳನ್ನು ಆಯ್ಕೆ ಮಾಡಲು, ಭಾರತೀಯ ಸಂವಹನ ಮತ್ತು ಮನರಂಜನಾ ಸಂಘ, ಬೆಂಗಳೂರಿನ ಬಸವನಗುಡಿಯ ವಿವಿಎನ್ ಪದವಿ ಕಾಲೇಜಿನಲ್ಲಿ ಡಬ್ಲ್ಯೂಎಎಂ ಅಂದರೆ ವೇವ್ಸ್ ಅನಿಮೆ ಮತ್ತು ಮಂಗಾ ಸ್ಪರ್ಧೆ ಆಯೋಜಿಸಿದೆ. ೧೨೧ ಸ್ಪರ್ಧಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದಾರೆ. ಡಬ್ಲ್ಯೂಎಎಂ ಅನಿಮೆ ಮತ್ತು ಮಾಂಗಾ ಎಂಬುದು ಜಪಾನ್ ಶೈಲಿಯ ಅನಿಮೇಶನ್ ಮತ್ತು ಕಾಮಿಕ್ಸ್ ಕಲೆಯಾಗಿದೆ. ಅರ್ಹತಾ ಸುತ್ತಿನ ಸ್ಪರ್ಧಿ ಮುಂಬೈನಲ್ಲಿ ವೇವ್ಸ್ - ೨೦೨೫ರ ವೇಳೆ ನಡೆಯುವ ಡಬ್ಲ್ಯೂಎಎಂ ರಾಷ್ಟ್ರೀಯ ಅಂತಿಮ ಸುತ್ತಿನಲ್ಲಿ ಭಾಗವಹಿಸಲಿದ್ದಾರೆ. ಈ ಕುರಿತು ಮಾತನಾಡಿರುವ ಭಾರತೀಯ ಸಂವಹನ ಮತ್ತು ಮನರಂಜನಾ ಸಂಘದ ಕಾರ್ಯದರ್ಶಿ ಅಂಕುರ್ ಭಾಸಿನ್, ಬೆಂಗಳೂರು ನಾವೀನ್ಯತೆ ಮತ್ತು ಸೃಜನಶೀಲತೆ ಕೇಂದ್ರವಾಗಿದ್ದು, ಇಲ್ಲಿಂದ ಹೊರಹೊಮ್ಮುವ ಕ್ರಿಯಾತ್ಮಕ ಡಿಜಿಟಲ್ ಕಲೆಯನ್ನು ವೀಕ್ಷಿಸಲು ಉತ್ಸುಕರಾಗಿದ್ದೇವೆ ಎಂದು ತಿಳಿಸಿದ್ದಾರೆ. ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ನಡೆಯುತ್ತಿರುವ ಸ್ಪರ್ಧೆ ಭಾರತದ ಅತಿದೊಡ್ಡ ಮಾಧ್ಯಮ ಸಂವಹನ ವೇದಿಕೆಯಾದ ವಿಶ್ವ ಶ್ರವಣ-ದೃಶ ಮನೋರಂಜನಾ ಶೃಂಗಸಭೆ - ವೇವ್ಸ್‌ನ ಭಾಗವಾಗಿದೆ.

<><*<><>*><>

ಹುಬ್ಬಳ್ಳಿಯಲ್ಲಿ ಬಾಲಕಿ ಲೈಂಗಿಕ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣ ಜನರ ಮನಸ್ಸನ್ನು ತುಂಬಾ ಘಾಸಿಗೊಳಿಸಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ ಶೆಟ್ಟರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಮೃತ ಬಾಲಕಿ ಮನೆಗೆ ಭೇಟಿ ನೀಡಿ, ತಂದೆ-ತಾಯಿಗೆ ಸಾಂತ್ವನ ಹೇಳಿದ ಬಳಿಕ ಮಾತನಾಡಿದ ಅವರು, ಮೃತ ಬಾಲಕಿ ಕುಟುಂಬಕ್ಕೆ ೨೫ ಲಕ್ಷ ರೂಪಾಯಿ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ನಗರ ಪ್ರದೇಶಗಳಲ್ಲಿ ಮಾದಕ ದ್ರವ್ಯ ಜಾಲ ಹೆಚ್ಚಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><*<><>*><>

ಶರಾವತಿ ಯೋಜನೆಯಡಿ ಭೂಮಿ ಮುಳುಗಡೆಯಾಗಿ ಸ್ಥಳಾಂತರಗೊಂಡಿದ್ದ ರೈತರನ್ನು ಒಕ್ಕಲೆಬ್ಬಿಸಲು ಕಂದಾಯ ಹಾಗೂ ಅರಣ್ಯ ಇಲಾಖೆ ಮುಂದಾಗಿದೆ ಎಂದು ಆರೋಪಿಸಿ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಶಿವಮೊಗ್ಗದಲ್ಲಿ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶಿವಮೊಗ್ಗ ಗ್ರಾಮಾಂತರ ಶಾಸಕಿ ಶಾರದಾ ಪೂರ್ಯಾನಾಯ್ಕ, ಶರಾವತಿ ಯೋಜನೆಯಡಿ ಮುಳುಗಡೆಯಾಗಿ ಪರ್ಯಾಯ ಭೂಮಿಯಲ್ಲಿ ಅನೇಕ ವರ್ಷಗಳಿಂದ ಕೃಷಿ ಮಾಡುತ್ತಿರುವ ರೈತರನ್ನು ಅರಣ್ಯ ಹಾಗೂ ಕಂದಾಯ ಇಲಾಖೆ ಒಕ್ಕಲೆಬ್ಬಿಸಲು ಮುಂದಾಗಿದೆ ಎಂದು ಆರೋಪಿಸಿದ್ದಾರೆ.

ಧ್ವನಿ : ಗ್ರಾಮಾಂತರ ಶಾಸಕಿ ಶಾರದಾ ಪೂರ್ಯಾನಾಯ್ಕ

<><*<><>*><>

ಅಖಿಲ ಭಾರತ ೮೮ ನೇ ಕನ್ನಡ ಸಾಹಿತ್ಯ ಸಮ್ಮೇಳನ ಡಿಸೆಂಬರ್ ನಲ್ಲಿ ೬೭ ವರ್ಷಗಳ ನಂತರ ಬಳ್ಳಾರಿಯಲ್ಲಿ ನಡೆಯಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಡೋಜ ಮಹೇಶ್ ಜೋಷಿ ಹೇಳಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳು ಒಟ್ಟಾಗಿ ಸಮ್ಮೇಳನ ನಡೆಸಲಿದೆ ಎಂದು ತಿಳಿಸಿದ್ದಾರೆ.
ಧ್ವನಿ : ಮಹೇಶ್ ಜೋಷಿ

<><*<><>*><>

ಶಿವಮೊಗ್ಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಶಿವಮೊಗ್ಗ ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಮಹೇಶ್ ಜೋಶಿ ವಿರುದ್ಧ ಪ್ರತಿಭಟನೆ ನಡೆಸಿತು.
ಜಿಲ್ಲಾಧ್ಯಕ್ಷ ಸ್ಥಾನದಿಂದ ನಿಮ್ಮನ್ನು ಏಕೆ ವಜಾಗೊಳಿಸಬಾರದು ಎಂದು ಕಾರಣ ಕೇಳಿ ಜಿಲ್ಲಾಧ್ಯಕ್ಷ ಡಿ.ಮಂಜುನಾಥ್ ಅವರಿಗೆ ನೋಟಿಸ್ ನೀಡಿರುವ ಕ್ರಮವನ್ನು ಪ್ರತಿಭಟನಾಕಾರರು ಖಂಡಿಸಿದರು.
ಈ ಸಂದರ್ಭದಲ್ಲಿ ಮಾತನಾಡಿದ ನಾಡೋಜ ಕುಂ.ವೀರಭದ್ರಪ್ಪ, ಪರಿಷತ್ ಕಾರ್ಯಚಟುವಟಿಕೆ ವಿಕೇಂದ್ರಿಕರಣ ಆಗಬೇಕು ಎಂದರು.
ಧ್ವನಿ : ಕುಂ. ವೀರಭದ್ರಪ್ಪ

<><*<><>*><>

ಸಂಕ್ಷಿಪ್ತ ಸುದ್ದಿ

೧. ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಆರ್ಥಿಕ ಸಬಲರನ್ನಾಗಿ ಮಾಡಿಸಿ ಸ್ವಾವಲಂಬಿ ಹಾಗೂ ಸುಧಾರಿತ ಜೀವನ ನಡೆಸುವಂತೆ ಮಾಡುವುದು ಪಂಚ ಗ್ಯಾರಂಟಿ ಯೋಜನೆಯ ಉದ್ದೇಶವಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>